Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 28-02-2022

**ಪತ್ರಿಕಾ ಪ್ರಕಟಣೆ:**

## ರಾಷ್ಟ್ರೀಯ ವಿಜ್ಞಾನ ದಿನದ ವಿದ್ಯುಕ್ತ ಸಮಾರಂಭ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳದಲ್ಲಿ ಫೆಬ್ರುವರಿ 28 ರಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ನಿಮಿತ್ತ ಆಯೋಜಿಸಿದ್ದ ಸಮಾರಂಭದಲ್ಲಿ ತಾಂತ್ರಿಕ ಉಪಕರಣಗಳ ಪ್ರದರ್ಶನ ಕೇಂದ್ರ ಮತ್ತು ವಿದ್ಯಾರ್ಥಿಗಳ ಮಿನಿ ಪ್ರಾಜೆಕ್ಟ್ ಮೇಳ ಉದ್ಘಾಟನೆಗೊಂಡಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೇರಳದ ತಿರುವನಂತಪುರಮ್‌ನ ಲೈಟ್ ಲಾಜಿಕ್ ಹೊಲೊಗ್ರಾಫಿ ಸಂಸ್ಥೆಯ ಅಧ್ಯಕ್ಷರು ಮತ್ತು ಖ್ಯಾತ ವಿಜ್ಞಾನಿಗಳಾದ ಡಾ. ಪಿ ಟಿ ಅಜಿತ್‌ಕುಮಾರ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ತಾಂತ್ರಿಕ ಪ್ರದರ್ಶನದ ಆಯೋಜನೆಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು. ಹೊಲೊಗ್ರಾಮ್ ಮುದ್ರಣ ಕ್ಷೇತ್ರದ ತಜ್ಞರಾಗಿರುವ ಅವರು ಲೇಸರ್ ಕಿರಣಗಳಿಂದ ಹೊಲೊಗ್ರಾಮ್ ಮುದ್ರಿಸುವ ಪ್ರಾಯೋಗಿಕ ಪ್ರಾತ್ಯಕ್ಷಿಕೆ ನೀಡಿದರು. ಗೌರವ ಅತಿಥಿಗಳಾಗಿ ಆಗಮಿಸಿದ್ದ ಬೆಳಗಾವಿಯ ಕ್ರೈಂಟರ್ಸ್ ಗ್ರುಪ್ ಕಂಪನಿಯ ಮುಖ್ಯಸ್ಥರಾದ ಶ್ರೀ. ನೀಲೇಶ್ ಚೌಗುಲೆ ತಮ್ಮ ಔದ್ಯಮಿಕ ಜೀವನದ ಅನುಭವಗಳನ್ನು ಹಂಚಿಕೊಂಡರು ಹಾಗೂ ವಿದ್ಯಾರ್ಥಿಗಳು ಉತ್ತಮ ವ್ಯಕ್ತಿತ್ವ ರೂಪಿಸಿಕೊಂಡು ಯಶಸ್ಸು ಹೊಂದಬೇಕೆಂದು ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್ ಮಾತನಾಡುತ್ತ ಕೈಗಾರಿಕೆಯಲ್ಲಿ ಬಳಸುವ ತಂತ್ರಜ್ಞಾನಗಳನ್ನು ಸುಲಭವಾಗಿ ತಿಳಿದುಕೊಳ್ಳಲು ಈ ಪ್ರದರ್ಶನ ಕೇಂದ್ರ ವೇದಿಕೆಯಾಗಲಿದೆ ಎಂದು ನುಡಿದರು.

ಜಾಗೃತಿ' ಎಂಬ ಶೀರ್ಷಿಕೆಯಡಿಯಲ್ಲಿ ನಿರ್ಮಿಸಿರುವ ತಾಂತ್ರಿಕ ಉಪಕರಣಗಳ ಪ್ರದರ್ಶನ ಕೇಂದ್ರ ಮತ್ತು 'ಅಂಕುರ್' ಮಿನಿ ಪ್ರಾಜೆಕ್ಟ್ ಮೇಳ ವೀಕ್ಷಿಸಲು ಸ್ಥಳೀಯ ಪ್ರೌಢಶಾಲೆಗಳ 300 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆಗಮಿಸಿದ್ದರು. ಪ್ರಥಮ ವರ್ಷದ ವಿದ್ಯಾರ್ಥಿಗಳು ನಿರ್ಮಿಸಿದ 50 ಕ್ಕೂ ಹೆಚ್ಚು ಪ್ರಾಜೆಕ್ಟ್ ಮಾದರಿಗಳನ್ನು ಇಲ್ಲಿ ಪ್ರದರ್ಶಿಸಲಾಯಿತು. ಕಾರ್ಯಕ್ರಮದ ಅಂತ್ಯದಲ್ಲಿ ಜಲ ವಿದ್ಯುಚ್ಛಕ್ತಿ ಘಟಕ, ಮಾದರಿ ಸೇನಾ ನೆಲೆ, ಘನ ತ್ಯಾಜ್ಯ ಸಂಸ್ಕರಣಾ ಘಟಕ, ಸ್ವಯಂಚಾಲಿತ ಸಾರಿಗೆ ರೋಬೊಟ್, ಸ್ವಯಂಚಾಲಿತ ಗೃಹೋಪಯೋಗಿ ವ್ಯವಸ್ಥೆ, ಸೈನ್ಯ ಸುರಕ್ಷತಾ ವ್ಯವಸ್ಥೆ ಮತ್ತು ತ್ಯಾಜ್ಯ ನೀರಿನ ಶುದ್ಧೀಕರಣ ವ್ಯವಸ್ಥೆಯ ಮಾದರಿಗಳಿಗೆ ಪ್ರಶಸ್ತಿ ನೀಡಲಾಯಿತು. ಕ್ರೀಡೆಯಲ್ಲಿ ಸಾಧನೆಗೈದ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಮತ್ತು ಸಂಶೋಧನಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ಉಪನ್ಯಾಸಕರನ್ನು ಈ ಸಂದರ್ಭದಲ್ಲಿ ಪುರಸ್ಕರಿಸಲಾಯಿತು. ಜಮಖಂಡಿ ಮೂಲದ ಇ ಎಂಡ್ ಸಿ ವಿಭಾಗದ ವಿದ್ಯಾರ್ಥಿ ಅಭಿಷೇಕ ಹೂಗಾರ್ ಚಿತ್ರಿಸಿದ ಪ್ರಸಿದ್ಧ ವ್ಯಕ್ತಿಗಳ ಚಿತ್ರಗಳನ್ನು ಈ ಸಂದರ್ಭದಲ್ಲಿ ಪ್ರದರ್ಶಿಸಲಾಯಿತು.

ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ಸಭಿಕರನ್ನು ಸ್ವಾಗತಿಸಿದರು. ಪ್ರೊ. ಲಕ್ಷ್ಮಿ ಹಟ್ಟಿಹೊಳಿ ಮತ್ತು ಪ್ರೊ. ರಾಜೇಶ್ವರಿ ಎನ್ ನಿರೂಪಿಸಿದರು., ಶಿಕ್ಷಣ ಸಂಯೋಜಕರಾದ ಡಾ. ಆರ್ ಎಸ್ ಮುನ್ನೊಳ್ಳಿ ವಂದಿಸಿದರು. ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ ಡಾ. ಮಹೇಂದ್ರ ದೀಕ್ಷಿತ್, ಪ್ರೊ. ಎಸ್ ಡಿ ಕುಲಕರ್ಣಿ, ಎಲ್ಲ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal




Karnatak Law Society's
VISHWANATHRAO DESHPANDE
INSTITUTE OF TECHNOLOGY
Haliyal, Uttara Kannada Dist. Karnataka – 581329
On the occasion of
NATIONAL SCIENCE DAY - 2022
Inauguration of
nkur" - Mini Projects Exhibition
( By First Year Students )
ate: 28-02-2022, Monday
Venue: KLS VDIT Campus


ELECTRICAL & ELECTRONICS ENGINEERING
MECHANICAL ENGINEERING